ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯ
ಜ್ಞಾನಸಾಗರ ಆವರಣ, ವಿನಾಯಕ ನಗರ, ಕಂಟೋನ್ಮೆಂಟ್, ಬಳ್ಳಾರಿ-583105
ಕುಲಸಚಿವರು ದೂರವಾಣಿ:08392-242703 ಫ್ಯಾಕ್ಸ್ :08392-242907

ಸಂಖ್ಯೆ: ವಿಶ್ರೀಕೃವಿಬ/ಆಡಳಿತ/2016-17/43 ದಿನಾಂಕ: 11.04.2017

## ಸುತ್ತೋಲೆ

ಮಾನ್ಯ ಕುಲಪತಿಗಳ ನಿರ್ದೇಶನದ ಮೇರೆಗೆ, ಈ ಮೂಲಕ ಎಲ್ಲಾ ಸ್ನಾತಕ ಶಿಕ್ಷಣ ಮಹಾವಿದ್ಯಾಲಯಗಳ ಪ್ರಾಚಾರ್ಯರುಗಳಿಗೆ ತಿಳಿಯಪಡಿಸುವುದೇನೆಂದರೆ, 2016-17ನೇ ಶೈಕ್ಷಣಿಕ ಸಾಲಿನ ಬಿ.ಇಡಿ ಪ್ರಥಮ ಸೆಮಿಸ್ಟರ್ ವಿದ್ಯಾರ್ಥಿಗಳ ಪ್ರವೇಶ ಅನುಮೋದನೆಗೆ ಸಂಬಂಧಿಸಿದಂತೆ, ಬರುವ 21.04.2017 ರಿಂದ 26.04.2017ರ ವರೆಗಿನ ಅವಧಿಯಲ್ಲಿ ತಮ್ಮ ತಮ್ಮ ಮಹಾವಿದ್ಯಾಲಯಗಳಲ್ಲಿ ಪ್ರವೇಶ ಪಡೆದ ವಿದ್ಯಾರ್ಥಿಗಳ ಪಟ್ಟಿ, ಶುಲ್ಕ ಹಾಗೂ ಈ ಕೆಳಕಂಡ ಮೂಲ ದಾಖಲಾತಿಗಳನ್ನು ವಿದ್ಯಾಮಂಡಲ ವಿಭಾಗದಲ್ಲಿ ಸಲ್ಲಿಸಿ, ವಿದ್ಯಾರ್ಥಿಗಳ ಪ್ರವೇಶ ಅನುಮೋದನೆಯನ್ನು ಪಡೆದುಕೊಳ್ಳಲು ಸೂಚಿಸಿದೆ.

1. ಎಸ್.ಎಸ್.ಎಲ್.ಸಿ ಅಂಕಪಟ್ಟಿ
2. ಪಿ.ಯು.ಸಿ ಅಂಕಪಟ್ಟಿ
3. ಸ್ನಾತಕ/ಸ್ನಾತಕೋತ್ತರ ಪದವಿಗಳ ಎಲ್ಲಾ ಅಂಕಪಟ್ಟಿಗಳು
4. ಹಿಂದಿನ ಮಹಾವಿದ್ಯಾಲಯಗಳಿಂದ ಪಡೆದ ಮೂಲ ವರ್ಗಾವಣೆ ಪ್ರಮಾಣ ಪತ್ರ
5. ರಾಜ್ಯದ ಅನ್ಯ ವಿಶ್ವವಿದ್ಯಾಲಯಗಳ ನಿಯಮಿತ ವಿದ್ಯಾರ್ಥಿಗಳಾಗಿದ್ದಲ್ಲಿ ವಲಸೆ ಪ್ರಮಾಣ ಪತ್ರ
6. ಸರ್ಕಾರಿ ಕೋಟಾದಡಿ ಪ್ರವೇಶ ಪಡೆದ ವಿದ್ಯಾರ್ಥಿಗಳಾಗಿದ್ದಲ್ಲಿ ನಿಯುಕ್ತಿ ಪತ್ರ
7. ರಾಜ್ಯದ ಅನ್ಯ ವಿಶ್ವವಿದ್ಯಾಲಯಗಳ ಅಥವಾ ಅನ್ಯ ರಾಜ್ಯ ವಿಶ್ವವಿದ್ಯಾಲಯಗಳ ಬಾಹ್ಯ ವಿದ್ಯಾರ್ಥಿಗಳಾಗಿದ್ದಲ್ಲಿ ಅಂತಹ ವಿಶ್ವವಿದ್ಯಾಲಯಗಳ ಮಾನ್ಯತೆ ಹಾಗೂ ನೈಜತಾ ಪ್ರಮಾಣಪತ್ರ.

ಮೇಲ್ಕಂಡ ಎಲ್ಲಾ ಮೂಲ ದಾಖಲಾತಿಗಳೊಂದಿಗೆ, ಹಾಜರಾಗದ ಮಹಾವಿದ್ಯಾಲಯಗಳ ವಿದ್ಯಾರ್ಥಿಗಳ ಪ್ರವೇಶ ಅನುಮೋದನೆಯನ್ನು ರದ್ದುಗೊಳಿಸಲಾಗುವುದು ಹಾಗೂ ಅದಕ್ಕೆ ಆಯಾ ಮಹಾವಿದ್ಯಾಲಯಗಳ ಪ್ರಾಚಾರ್ಯರುಗಳನ್ನೇ ಹೊಣೆಗಾರರನ್ನಾಗಿ ಮಾಡಲಾಗುವುದು.

11/4/2017

**ಕುಲಸಚಿವರು**
ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯ
ಬಳ್ಳಾರಿ.

**ಪ್ರತಿಗಳನ್ನು:**

1. ಮಾನ್ಯ ಕುಲಪತಿಗಳ ಆಪ್ತ ಕಾರ್ಯದರ್ಶಿ, ವಿಶ್ರೀಕೃ ವಿಶ್ವವಿದ್ಯಾಲಯ, ಬಳ್ಳಾರಿ,
2. ಮಾನ್ಯ ಕುಲಸಚಿವರು(ಮೌಲ್ಯಮಾಪನ), ವಿಶ್ರೀಕೃ ವಿಶ್ವವಿದ್ಯಾಲಯ, ಬಳ್ಳಾರಿ,
3. ಎಲ್ಲಾ ಸ್ನಾತಕ ಸಂಯೋಜಿತ ಶಿಕ್ಷಣ ಮಹಾವಿದ್ಯಾಲಯಗಳ ಪ್ರಾಚಾರ್ಯರು, ವಿಶ್ರೀಕೃ ವಿಶ್ವವಿದ್ಯಾಲಯ, ಬಳ್ಳಾರಿ,
4. ನಿರ್ದೇಶಕರು, ಕಾಲೇಜು ಅಭಿವೃದ್ಧಿ ಮಂಡಳಿ, ವಿಶ್ರೀಕೃ ವಿಶ್ವವಿದ್ಯಾಲಯ, ಬಳ್ಳಾರಿ,
5. ಕಛೇರಿ ಪ್ರತಿ.